ನಿಯಮ - 72
ಕ್ರಮ ಸಂಖ್ಯೆ - 135

**ಕರ್ನಾಟಕ ಸರ್ಕಾರ**

ಸಂಖ್ಯೆ: ಕೌಉಜೀಇ 69 ಕೈತಪ್ರ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25/11/2021

ಇಂದ,
ಸರ್ಕಾರದ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.
ಬಹುಮಹಡಿ ಕಟ್ಟಡ, ಬೆಂಗಳೂರು.

ಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು,
ವಿಧಾನಸೌಧ.

ಮಾನ್ಯರೆ,

**ವಿಷಯ:** ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್.ಜಿ.ನಮೋಶಿ ಇವರು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ ನೀಡುವ ಬಗ್ಗೆ.

**ಉಲ್ಲೇಖ:**
1. ಸಂಖ್ಯೆ: ಕವಿಪ/ಪ್ರಶಾ/135/144ನೇಅ/ನಿ-72/2021 ದಿನಾಂಕ: 20/09/2021.
2. ಅಧೀನ ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು ಇವರ ಪತ್ರ ಸಂಖ್ಯೆ: ಕವಿಪ:ಪ್ರಶಾ:144ನೇಅ:112ಇಉಕೋ:2021 ದಿನಾಂಕ: 28/10/2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರಗಳ ಕಡೆ ತಮ್ಮ ಗಮನ ಸೆಳೆಯುತ್ತಾ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್.ಜಿ.ನಮೋಶಿ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ತಕ್ಕೆ ಉತ್ತರದ 5 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

25/11/2021
(ರಂಗನಾಥ)
ಸರ್ಕಾರದ ಸರ್ಕಾರದ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

25/11/2021

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್.ಜಿ.ನಮೋಶಿ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| ವಿಷಯ: | ಅನುದಾನಿತ ಖಾಸಗಿ ಐ.ಟಿ.ಐ. ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ 2014ರ ಹಿಂದೆ ನಿವೃತ್ತಿ ಹೊಂದಿರುವ ಅನುದಾನಿತ ಸಿಬ್ಬಂದಿಗಳಿಗೆ ಪಿಂಚಣಿ ಆದೇಶ ಪೂರ್ವಾನ್ವಯಗೊಳಿಸಿ ಎಲ್ಲಾ ಸೌಲಭ್ಯಗಳನ್ನು ನೀಡುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯ ಬಯಸುತ್ತೇನೆ. |

* * *

ಶ್ರೀ ಪಿ.ಎಸ್.ಎಸ್. ಥಾಮ್ಸ್ ವರದಿಯ ಶಿಫಾರಸ್ಸಿನನ್ವಯ ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಇರುವಂತೆ ಪಿಂಚಣಿ, ಗ್ರಾಚ್ಯುಯಿಟಿ, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಿಬ್ಬಂದಿಗೆ ಭವಿಷ್ಯವರ್ತಿಯಾಗಿ (Prospective) ನೀಡಲು ಸರ್ಕಾರಿ ಆದೇಶ ಸಂಖ್ಯೆ ಕಾಇ 303 ಇಟಿಐ 2014 ದಿನಾಂಕ 29.12.2014 ರಲ್ಲಿ ಮಂಜೂರಾತಿ ನೀಡಲಾಗಿದೆ.

ಪಿಂಚಣಿ ಮತ್ತು ಗ್ರ್ಯಾಚ್ಯುಯಿಟಿ ಸೌಲಭ್ಯವು ರಾಜ್ಯದ 196 ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ದಿನಾಂಕ: 01/04/2006ರ ಪೂರ್ವದಲ್ಲಿ ನೇಮಕಾತಿ ಹೊಂದಿರುವ ಸಿಬ್ಬಂದಿಗೆ ಮಾತ್ರ ಅನ್ವಯಿಸುತ್ತದೆ.

ಆದುದರಿಂದ, ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಪಿಂಚಣಿ ನೀತಿಯನ್ನು ದಿನಾಂಕ: 29/12/2014ರಿಂದ ಭವಿಷ್ಯವರ್ತಿಯಾಗಿ (Prospective) ಜಾರಿಗೊಳಿಸಿ ಆದೇಶಿಸಿದೆ. ಆದ್ದರಿಂದ ಪೂರ್ವಾನ್ವಯವಾಗಿ ನೀಡಲು ಅವಕಾಶಗಳಿರುವುದಿಲ್ಲ.

* * * *

**ಕೌಉಜೀಇ 69 ಕೈತಪ್ರ 2021**

(ಡಾ.ಸಿ.ಎನ್.ಅಶ್ವಥ ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಸಚಿವರು.